ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕಾರವಾರ ಜಿಲ್ಲೆಯಲ್ಲಿ ಪಿ.ಎಮ್.ಜಿ.ಎಸ್.ವೈ ಯೋಜನೆಯಡಿಯ ಕಾಮಗಾರಿ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

614 (713) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಕಾರಾವಾರ ಜಿಲ್ಲೆಯಲ್ಲಿ ; "ನಮ್ಮ ಗ್ರಾಮ ನಮ್ಮ ರಸ್ತೆ" ಹಾಗೂ ಪಿ.ಎಮ್.ಜಿ.ಎಸ್.ವೈ ಯೋಜನೆಯಡಿಯಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ; (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗೆ ಮೀಸಲಿಟ್ಟ, ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು;

(ಇ) ಈ ಯೋಜನೆಯಡಿಯಲ್ಲಿ ಗ್ರಾಮೀಣ ರಸ್ತೆಗಳನ್ನು ಆಯ್ಕೆ ಮಾಡುವಾಗ ಅನುಸರಿಸಲಾಗುವ ನಿಯಮಗಳಾವುವು; (ನಿಯಮಗಳ ಆದೇಶದ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಯೋಜನೆಯಡಿ ಮಂಜೂರಾದ ಹಣದಲ್ಲಿ ಬಹಳಷ್ಟು ಕಾಮಗಾರಿಯಲ್ಲಿ ಅವ್ಯವಹಾರ ಆಗಿದ್ದು, ಅಂತಹವರ ಮೇಲೆ ತನಿಖೆ ಮಾಡಿ ಸೂಕ್ತ ಕ್ರಮ ತೆಗೆದುಕೊಳ್ಳುವುದೇ; ಹಾಗಿದ್ದಲ್ಲಿ, ಎಷ್ಟು ದಿನದಲ್ಲಿ ತನಿಖೆ ಮಾಡಿ ಕ್ರಮ ಕೈಗೊಳ್ಳಲಾಗುವುದು ?